# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | | 1177 |
| ಸದಸ್ಯರ ಹೆಸರು | | ಶ್ರೀ ಅರುಣ ಶಹಾಪುರ<br>(ಶಿಕ್ಷಕರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | | 20-12-2018 |
| ಉತ್ತರಿಸಬೇಕಾದ ಸಚಿವರು | | ಉನ್ನತ ಶಿಕ್ಷಣ ಸಚಿವರು |
| ಪ್ರಶ್ನೆ | | ಉತ್ತರ |
| ಅ) | ರಾಜ್ಯದಲ್ಲಿರುವ ಸರ್ಕಾರಿ ಪದವಿ ಕಾಲೇಜುಗಳ ಸಂಖ್ಯೆ ಎಷ್ಟು; ಸರ್ಕಾರಿ ಸ್ನಾತಕೋತ್ತರ ಕೇಂದ್ರಗಳೆಷ್ಟು; ಹಾಗೂ ಅಲ್ಲಿ ಕಾರ್ಯನಿರ್ವಹಿಸುತ್ತಿರುವ ಪೂರ್ಣಾವಧಿ ಬೋಧಕ ಸಿಬ್ಬಂದಿ ಸಂಖ್ಯೆ ಎಷ್ಟು; | ರಾಜ್ಯದಲ್ಲಿರುವ ಸರ್ಕಾರಿ ಪದವಿ ಕಾಲೇಜುಗಳ ಸಂಖ್ಯೆ-413 ಇವುಗಳಲ್ಲಿ 120 ಸರ್ಕಾರಿ ಪದವಿ ಕಾಲೇಜುಗಳಲ್ಲಿ ಸ್ನಾತಕೋತ್ತರ ಕೋರ್ಸ್‌ಗಳನ್ನು ಪ್ರಾರಂಭಿಸಲಾಗಿದೆ.<br>ಇಲಾಖಾ ವ್ಯಾಪ್ತಿಗೊಳಪಡುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೂರ್ಣಾವಧಿ ಬೋಧಕ ಸಿಬ್ಬಂದಿ ಸಂಖ್ಯೆ-6353. |
| ಆ) | ಅತಿಥಿ ಬೋಧಕ ಸಿಬ್ಬಂದಿಗಳ ಸಂಖ್ಯೆ ಎಷ್ಟು; | ಪ್ರಸ್ತುತ 2018-19ನೇ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರ ಸಂಖ್ಯೆ:12,674. |
| ಇ) | ಅತಿಥಿ ಬೋಧಕರ ಸೇವಾ ಸಕ್ರಮಾತಿ, ಸೇವಾ ಭದ್ರತೆ, ಸಂಬಳ ಹೆಚ್ಚಳ, ಸೇವಾ ಸೌಲಭ್ಯಗಳನ್ನು ಒದಗಿಸುವ ಬೇಡಿಕೆ ಕುರಿತು ಸರ್ಕಾರ ಯಾವಾಗ ಹಾಗೂ ಎಂತಹ ಕ್ರಮಕೈಗೊಳ್ಳುವುದು; | ಅತಿಥಿ ಉಪನ್ಯಾಸಕರುಗಳು ಇಲಾಖೆಯಲ್ಲಿ ಯಾವುದೇ ಮಂಜೂರಾದ ಖಾಲಿ ಹುದ್ದೆಗಳ ಎದುರಾಗಿ ಕರ್ತವ್ಯ ನಿರ್ವಹಿಸುತ್ತಿರುವುದಿಲ್ಲ. ಪ್ರತಿ ಶೈಕ್ಷಣಿಕ ವರ್ಷದಲ್ಲಿ ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಉಂಟಾಗುವ ಕಾರ್ಯಭಾರವನ್ನು ಮೊದಲು ಖಾಯಂ ಅಧ್ಯಾಪಕರಿಗೆ ಹಂಚಿಕೆ ಮಾಡಿ, ನಂತರ ಉಳಿಕೆಯಾಗುವ ಹೆಚ್ಚುವರಿ ಕಾರ್ಯಭಾರವನ್ನು ನಿರ್ವಹಿಸಲು ಮಾತ್ರ ತಾತ್ಕಾಲಿಕವಾಗಿ ಅತಿಥಿ ಉಪನ್ಯಾಸಕರುಗಳ ಸೇವೆಯನ್ನು ಬಳಸಿಕೊಳ್ಳಲಾಗುತ್ತದೆ. ಮುಂದುವರೆದು, ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಈ ಸಂಬಂಧ ಯು.ಜಿ.ಸಿ. ನಿಯಮಾವಳಿಗಳಲ್ಲಿ ತಿಳಿಸಿರುವ ಮಾನದಂಡಗಳನ್ನಾಧರಿಸಿ, ನೇರ ನೇಮಕಾತಿ ಮೂಲಕ ಭರ್ತಿ ಮಾಡಬೇಕಾಗಿರುತ್ತದೆ. ಆದುದರಿಂದ, ತಾತ್ಕಾಲಿಗವಾಗಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪ್ಪನ್ಯಾಸಕರಿಗೆ ಸೇವಾ ಭದ್ರತೆಯನ್ನು ಒದಗಿಸಲು |

| | | |
|---|---|---|
| | | ಅಥವಾ ಖಾಯಂಗೊಳಿಸಲು ಅವಕಾಶವಿರುವುದಿಲ್ಲ. ಅತಿಥಿ ಉಪನ್ಯಾಸಕರಿಗೆ ನೀಡುತ್ತಿರುವ ಗೌರವಧನವನ್ನು ಹೆಚ್ಚಿಸುವ ಸಂಬಂಧ ಅನುದಾನದ ಲಭ್ಯತೆಯ ಬಗ್ಗೆ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಿ, ಕ್ರಮ ಕೈಗೊಳ್ಳಲಾಗುವುದು. |
| ಈ) | ಅತಿಥಿ ಉಪನ್ಯಾಸಕರ ಸಂಬಳವನ್ನು ಸಮಯಕ್ಕೆ ಸರಿಯಾಗಿ ಕೊಡಲಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದಯೇ; ಸಮಯಕ್ಕೆ ಸರಿಯಾಗಿ ಅವರ ಸಂಬಳ ಪಾವತಿ ಮಾಡಲು ಸರ್ಕಾರ ಕೈಗೊಂಡ ಕ್ರಮವೇನು? | ಅತಿಥಿ ಉಪನ್ಯಾಸಕರ ಸಂಬಳವನ್ನು ಸಮಯಕ್ಕೆ ಸರಿಯಾಗಿ ಕೊಡಲಾಗದಿರುವುದು ಇಲಾಖೆಯ ಗಮನಕ್ಕೆ ಬಂದಿರುತ್ತದೆ.<br><br>2018-19ನೇ ಸಾಲಿನಲ್ಲಿ ಅತಿಥಿ ಉಪನ್ಯಾಸಕರ ಸಂಭಾವನೆ ಪಾವತಿಗಾಗಿ ರೂ.80,95,00,000 ಅನುದಾನವನ್ನು ಒದಗಿಸಲಾಗಿದ್ದು, ಇದರಲ್ಲಿ 3 ಕಂತುಗಳಲ್ಲಿ ರೂ.60,71,25,000 ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ. 4ನೇ ತ್ರೈಮಾಸಿಕ ಅನುದಾನ ರೂ.2023.75 ಲಕ್ಷಗಳನ್ನು ಶೀಘ್ರ ಬಿಡುಗಡೆ ಮಾಡಲು ಅನುಮತಿ ನೀಡುವಂತೆ ಆರ್ಥಿಕ ಇಲಾಖೆಯನ್ನು ಕೋರಲಾಗಿದೆ. ಇದಲ್ಲದೆ ಪ್ರಸ್ತುತ ಸಾಲಿಗೆ ಅಗತ್ಯವಿರುವ ಹೆಚ್ಚುವರಿ ಅನುದಾನಕ್ಕೆ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿದೆ. |

(ಜಿ.ಟಿ. ದೇವೇಗೌಡ)

ಉನ್ನತ ಶಿಕ್ಷಣ ಸಚಿವರು

ಇಡಿ 337 ಡಿಸಿಇ 2018